# All India Radio: Bangalore
# Regional Bulletin In Kannada
# 08.01.2026 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. 'ಬಿ-ಖಾತಾ' ನಿವೇಶನಗಳಿಗೆ 'ಎ-ಖಾತಾ' ನೀಡಲು ರಾಜ್ಯ ಸಚಿವ ಸಂಪುಟ ಒಪ್ಪಿಗೆ

೨. ರಾಜ್ಯಾದ್ಯಂತ ೧೯೬ ಗ್ರಾಮೀಣ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಗಳ ಸ್ಥಾಪನೆಗೆ ರಾಜ್ಯ ಸರ್ಕಾರ ಅನುಮೋದನೆ

೩. ಪಶ್ಚಿಮ ಘಟ್ಟಗಳ ಪರಿಸರ ವಿಜ್ಞಾನ ತಜ್ಞರ ಸಮಿತಿಯ ಮಾಜಿ ಮುಖ್ಯಸ್ಥ ಪ್ರೊಫೆಸರ್ ಮಾಧವ ಗಾಡ್ಗೀಳ್ ನಿಧನ: ಗಣ್ಯರ ಸಂತಾಪ

೪. ವಿಜಯ್ ಹಜಾರೆ ಟ್ರೋಫಿ: ಎಲೈಟ್ 'ಎ' ಗುಂಪಿನ ಏಕದಿನ ಕ್ರಿಕೆಟ್ ಪಂದ್ಯದಲ್ಲಿಂದು ಕರ್ನಾಟಕ ವಿರುದ್ಧ ಮಧ್ಯಪ್ರದೇಶಕ್ಕೆ ಏಳು ವಿಕೆಟ್‌ಗಳ ಜಯ

***************

ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಸಕ್ರಮ ಪ್ರಾಧಿಕಾರದ ಅನುಮೋದನೆ ಪಡೆಯದೆ, ರಚಿಸಿರುವ ಬಡಾವಣೆಗಳಲ್ಲಿನ 'ಬಿ-ಖಾತಾ' ನಿವೇಶನ, ಕಟ್ಟಡ, ಅಪಾರ್ಟ್‌ಮೆಂಟ್, ಫ್ಲಾಟ್‌ಗಳಿಗೆ 'ಎ-ಖಾತಾ' ನೀಡಲು ರಾಜ್ಯ ಸಚಿವ ಸಂಪುಟ ಇಂದು ಒಪ್ಪಿಗೆ ಸೂಚಿಸಿದೆ.

ಇದೇ ವೇಳೆ ೧೨೭ ಕೋಟಿ ೪೦ ಲಕ್ಷ ರೂಪಾಯಿ ಅಂದಾಜು ವೆಚ್ಚದಲ್ಲಿ ಪ್ರಧಾನಮಂತ್ರಿ ಆಯುಷ್ಮಾನ್ ಭಾರತ್ ಯೋಜನೆಯಡಿ ರಾಜ್ಯಾದ್ಯಂತ ೧೯೬ ಗ್ರಾಮೀಣ ಆರೋಗ್ಯ ಮತ್ತು ಸ್ವಾಸ್ಥ್ಯ ಕೇಂದ್ರಗಳ ಸ್ಥಾಪನೆಗೆ ಸಚಿವ ಸಂಪುಟ ಅನುಮೋದನೆ ನೀಡಿದೆ.

ಬೆಂಗಳೂರಿನ ಜಯನಗರದಲ್ಲಿ ೨೪ ಕೋಟಿ ರೂಪಾಯಿ ಅಂದಾಜು ಮೊತ್ತದಲ್ಲಿ ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯದ ಎರಡನೇ ಹಂತದ ಕಟ್ಟಡ ಕಾಮಗಾರಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಸನ್ನಡತೆ ಆಧಾರದ ಮೇಲೆ ವಿವಿಧ ಕೇಂದ್ರ ಕಾರಾಗೃಹಗಳಲ್ಲಿರುವ ೩೩ ಜೀವಾವಧಿ ಶಿಕ್ಷಾ ಬಂಧಿಗಳ ಅವಧಿಪೂರ್ವ ಬಿಡುಗಡೆಗೆ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಿದೆ. ಇಬ್ಬರು ಶಿಕ್ಷಾ ಬಂಧಿಗಳ ಬಿಡುಗಡೆಗೆ ಕೇಂದ್ರ ಗೃಹ ಇಲಾಖೆ ಅನುಮತಿ ಪಡೆಯಲು ನಿರ್ಧರಿಸಲಾಗಿದೆ.

ತುಮಕೂರು ಮತ್ತು ರಾಯಚೂರಿನಲ್ಲಿ ಕಾಂಗ್ರೆಸ್ ಭವನ ಟ್ರಸ್ಟ್‌ಗೆ ಸ್ಥಳ ನೀಡಲು ಸಂಪುಟ ಒಪ್ಪಿಗೆ ಸೂಚಿಸಿದೆ.

***************

ವಿಜಯಪುರ ಜಿಲ್ಲೆಯ ವಿವಿಧ ಯೋಜನೆಯ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ಸಮಾರಂಭ ನಾಳೆ ನಗರದ ಬಿ.ಬಿ. ದರ್ಬಾರ ಮೈದಾನದ ಆವರಣದಲ್ಲಿ ನಡೆಯಲಿದೆ. ವಿವಿಧ ಕಾಮಗಾರಿಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನೆರವೇರಿಸಲಿದ್ದಾರೆ.

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಸೇರಿದಂತೆ ಅನೇಕ ಸಚಿವರು, ಶಾಸಕರು ಈ ವೇಳೆ ಉಪಸ್ಥಿತರಿರಲಿದ್ದಾರೆ.

**************

ಭಾರತ್ ಫೌಂಡೇಷನ್ ನೇತೃತ್ವದಲ್ಲಿ 'ಮಂಗಳೂರು ಲಿಟ್ ಫೆಸ್ಟ್'ನ ಎಂಟನೇ ಆವೃತ್ತಿ ಇದೇ ೧೦ ಮತ್ತು ೧೧ ರಂದು ಮಂಗಳೂರಿನ ಡಾ.ಟಿ.ಎಂ.ಎ ಪೈ ಇಂಟರ್‌ನ್ಯಾಷನಲ್ ಕನ್ವೆನ್ಷನ್ ಸೆಂಟರ್‌ನಲ್ಲಿ ಆಯೋಜಿಸಲಾಗಿದೆ ಎಂದು ಭಾರತ್ ಫೌಂಡೇಷನ್‌ನ ಟ್ರಸ್ಟಿ ಸುನಿಲ್ ಕುಲಕರ್ಣಿ ತಿಳಿಸಿದ್ದಾರೆ.

ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇದೇ ೧೦ ರಂದು ಶತವಾಧಾನಿ ಡಾ.ಆರ್.ಗಣೇಶ್ 'ಮಂಗಳೂರು ಲಿಟ್ ಫೆಸ್ಟ್' ಉದ್ಘಾಟಿಸಲಿದ್ದಾರೆ. ಇದೇ ವೇಳೆ ೨೦೨೬ನೇ ಲಿಟ್ ಫೆಸ್ಟ್ ಆವೃತ್ತಿಯ ವಿಶೇಷ ಪ್ರಶಸ್ತಿಯನ್ನು ಪದ್ಮಶ್ರೀ ಪುರಸ್ಕೃತೆ ಮೀನಾಕ್ಷಿ ಜೈನ್ ಅವರಿಗೆ ಪ್ರದಾನ ಮಾಡಲಾಗುತ್ತದೆ ಎಂದು ಮಾಹಿತಿ ನೀಡಿದರು.

ಪದ್ಮಭೂಷಣ ಎಸ್.ಎಲ್.ಭೈರಪ್ಪ ಅವರ ಗೌರವಾರ್ಥ ಶತಾವಧಾನಿ ಆರ್.ಗಣೇಶ್ ಮತ್ತು ಜಿ.ಬಿ.ಹರೀಶ್ ಇವರಿಂದ ವಿಶೇಷ ಗೋಷ್ಠಿ ನಡೆಯಲಿದೆ ಎಂದು ಅವರು ವಿವರಿಸಿದರು.

**************

ವಂದೇ ಮಾತರಂ ರಾಷ್ಟ್ರೀಯ ಗೀತೆಯ ೧೫೦ನೇ ವರ್ಷಾಚರಣೆ ಹಾಗೂ ವಿಕಸಿತ ಭಾರತ ಜಿ ರಾಮ್ ಜಿ ಸೇರಿದಂತೆ ಕೇಂದ್ರ ಪುರಸ್ಕೃತ ಯೋಜನೆಗಳ ಜಾಗೃತಿ ಅಭಿಯಾನ ಮತ್ತು ಛಾಯಾಚಿತ್ರ ಪ್ರದರ್ಶನ ನಾಳೆಯಿಂದ ಇದೇ ೧೧ ರವರೆಗೆ ಬಳ್ಳಾರಿಯ ಜಿಲ್ಲಾ ಪಂಚಾಯ್ತಿಯ ನಜೀರ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಇದರ ಅಂಗವಾಗಿ ಇಂದು ಪೋಷಣ್ ಅಭಿಯಾನ, ಭೇಟಿ ಬಚಾವೋ ಬೇಡಿ ಪಡಾವೋ, ಮಾತೃವಂದನ ಸೇರಿದಂತೆ ವಿವಿಧ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಸಹಕಾರಿಯಾಗುವಂತೆ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸ್ವಯಂ ಸೇವಾಸಂಸ್ಥೆಗಳ ಮಹಿಳೆಯರಿಂದ ರಂಗೋಲಿ ಸ್ಪರ್ಧೆ ನಡೆಯಿತು.

ನಾಳೆ ಕೇಂದ್ರ, ರಾಜ್ಯ ಪುರಸ್ಕೃತ ಯೋಜನೆಗಳ ಕುರಿತು ಸಮಗ್ರ ಮಾಹಿತಿ ಒದಗಿಸಲು ಮಾಧ್ಯಮ ಪ್ರತಿನಿಧಿಗಳಿಗೆ "ವಾರ್ತಾಲಾಪ" ಕಾರ್ಯಾಗಾರ ಹಮ್ಮಿಕೊಳ್ಳಲಾಗಿದೆ. ಜೊತೆಗೆ ಮೂರು ದಿನಗಳ ಕಾಲ ಛಾಯಾಚಿತ್ರ ಪ್ರದರ್ಶನವೂ ನಡೆಯಲಿದೆ.

**************

ಗ್ರಾಮೀಣ ಮತ್ತು ಬಡ ಕುಟುಂಬಗಳ ವಿದ್ಯಾರ್ಥಿಗಳ ನೆರವಿಗಾಗಿ ಡಾ.ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಉಚಿತ "ನಾಗರಿಕ ಸೇವಾ ಪರೀಕ್ಷಾ ತರಬೇತಿ ಕೇಂದ್ರ- ಮಾರ್ಗ" ಯೋಜನೆಯನ್ನು ಆರಂಭಿಸಿದೆ.

ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರೊ.ಪುರುಷೋತ್ತಮ ಬಿಳಿಮಲೆ, ನೂತನ ಕೇಂದ್ರವನ್ನು ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಅವರು, ಸರ್ಕಾರಿ ಉದ್ಯೋಗ ಅವಕಾಶಗಳು ಕ್ಷೀಣಿಸಿರುವ ಮತ್ತು ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಸೌಲಭ್ಯ ನೀಡದಿರುವ ಪರಿಣಾಮವಾಗಿ ಸಾಮಾಜಿಕ ನ್ಯಾಯ ಮರೀಚಿಕೆಯಾಗಿದೆ. ಕರ್ನಾಟಕದಲ್ಲಿ ಜಿಲ್ಲೆಗೊಂದು ವಿಶ್ವವಿದ್ಯಾಲಯ ಸ್ಥಾಪಿಸುವ ನೀತಿಯಿಂದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಣಕಾಸು ಕೊರತೆ ಮತ್ತು ಕಾಯಂ ಹುದ್ದೆಗಳ ನೇಮಕಾತಿ ವಿಳಂಬದಿಂದ ಗಂಭೀರ ಬಿಕ್ಕಟ್ಟಿನಲ್ಲಿ ಸಿಲುಕಿವೆ ಎಂದು ಅಭಿಪ್ರಾಯಪಟ್ಟರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳೊಂದಿಗೆ ಜಿಲ್ಲಾಡಳಿತದಿಂದ ಜಿಲ್ಲೆಯ ರೈತರ ಕುಂದು-ಕೊರತೆಗಳ ಸಭೆ ಆಯೋಜಿಸಲಾಗಿತ್ತು.

ಸಭೆಯಲ್ಲಿ ರೈತರ ಸಮಸ್ಯೆಗಳ ಕುರಿತು ಚರ್ಚಿಸಿ, ಅಹವಾಲು ಸ್ವೀಕರಿಸಲಾಯಿತು. ರೈತರು ಜಮೀನುಗಳ ಫವತಿ ಖಾತೆ, ಪೋಡಿ ದುರಸ್ತಿ, ಪಹಣಿಯಲ್ಲಿ ಹೆಸರು ಬದಲಾವಣೆ ಸಮಸ್ಯೆ, ರೈತರ ಜಮೀನುಗಳಿಗೆ ರಸ್ತೆ, ಸ್ಮಶಾನ ಜಾಗದ ಒತ್ತುವರಿ, ಅಕ್ರಮ ಮದ್ಯ ಮಾರಾಟ, ಕೆರೆ, ಸ್ಮಶಾನ, ಸರ್ಕಾರಿ ಜಾಗ ಒತ್ತುವರಿ, ಕಳಪೆ ಕಾಮಗಾರಿ, ಅಕ್ರಮ

ಗಣಿಗಾರಿಕೆ, ತ್ಯಾಜ್ಯ ಘಟಕ ಸರಿಪಡಿಸುವಿಕೆ, ಆಸ್ಪತ್ರೆಗಳ ಅವ್ಯವಸ್ಥೆ, ಶಾಶ್ವತ ಕೃಷಿ ವಲಯ, ಕುಡಿಯುವ ನೀರು ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ರೈತರು, ಜಿಲ್ಲಾಧಿಕಾರಿಗಳ ಗಮನಸೆಳೆದರು.

ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಮಾತನಾಡಿ, ಸರ್ಕಾರಿ ಜಾಗ, ಕೆರೆ, ರಾಜಕಾಲುವೆ, ಸ್ಮಶಾನ, ರಸ್ತೆ ಒತ್ತುವರಿಗೆ ಸಂಬಂಧಿಸಿದಂತೆ ದಾಖಲೆ ನೀಡಿದರೆ, ಪರಿಶೀಲನೆ ನಡೆಸಿ, ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

***************

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಸಮುದಾಯದ ಜನರನ್ನು ಆರ್ಥಿಕವಾಗಿ ಸ್ವಾವಲಂಬಿಗಳಾಗಿಸಲು ಹಾಗೂ ಪ್ರವಾಸೋದ್ಯಮವನ್ನು ಉತ್ತೇಜಿಸಲು ಪ್ರವಾಸೋದ್ಯಮ ಇಲಾಖೆ ವತಿಯಿಂದ ಮೊಬೈಲ್ ಕ್ಯಾಂಟೀನ್ ಖರೀದಿಗೆ ೫ ಲಕ್ಷ ರೂಪಾಯಿ ಸಹಾಯಧನ ವಿತರಣೆ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಮಂಡ್ಯ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಯೋಜನೆಯಡಿ ಜಿಲ್ಲೆಯಲ್ಲಿ ೧೧ ಜನರಿಗೆ ಸಹಾಯಧನ ನೀಡುವ ಗುರಿಯನ್ನು ಹೊಂದಲಾಗಿದೆ. ಈಗಾಗಲೇ ಮೊಬೈಲ್ ಕ್ಯಾಂಟೀನ್ ಯೋಜನೆಯಡಿ ಆರು ಫಲಾನುಭವಿಗಳಿಗೆ ಒಂದು ತಿಂಗಳ ಉದ್ಯಮಶೀಲತಾ ತರಬೇತಿ ನೀಡಲಾಗಿದೆ ಎಂದು ವಿವರಿಸಿದರು.

***************

ಪಶ್ಚಿಮ ಘಟ್ಟಗಳ ಪರಿಸರ ವಿಜ್ಞಾನ ತಜ್ಞರ ಸಮಿತಿಯ ಮಾಜಿ ಮುಖ್ಯಸ್ಥರಾಗಿದ್ದ ಪ್ರೊಫೆಸರ್ ಮಾಧವ ಧನಂಜಯ ಗಾಡ್ಗೀಳ್ ಅವರು ನಿನ್ನೆ ಪುಣೆಯ ಖಾಸಗಿ ಆಸ್ಪತ್ರೆಯಲ್ಲಿ ಅನಾರೋಗ್ಯದಿಂದ ನಿಧನರಾಗಿದ್ದಾರೆ. ಅವರಿಗೆ ೮೩ ವರ್ಷ ವಯಸ್ಸಾಗಿತ್ತು.

ಅವರ ನಿಧನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.

ಪ್ರೊಫೆಸರ್ ಗ್ಯಾಡ್ಗೀಳ್, ಪರಿಸರಶಾಸ್ತ್ರಜ್ಞ, ಶೈಕ್ಷಣಿಕ ಬರಹಗಾರ, ಅಂಕಣಕಾರ ಹಾಗೂ ಭಾರತೀಯ ವಿಜ್ಞಾನ ಸಂಸ್ಥೆಯ ಆಶ್ರಯದಲ್ಲಿ ಸಂಶೋಧನಾ ವೇದಿಕೆಯಾದ ಸೆಂಟರ್ ಫಾರ್ ಇಕಲಾಜಿಕಲ್ ಸೈನ್ಸಸ್‌ನ ಸ್ಥಾಪಕರು. ಅವರು ಪ್ರಧಾನ ಮಂತ್ರಿಗಳ ವೈಜ್ಞಾನಿಕ ಸಲಹಾ ಮಂಡಳಿಯ ಮಾಜಿ ಸದಸ್ಯರಾಗಿದ್ದರು.

ವೋಲ್ವೋ ಪರಿಸರ ಪ್ರಶಸ್ತಿ ಮತ್ತು ಪರಿಸರ ಸಾಧನೆಗಾಗಿ ಟೈಲರ್ ಪ್ರಶಸ್ತಿಗೆ ಗಾಡ್ಗೀಳ್ ಭಾಜನರಾಗಿದ್ದಾರೆ. ಭಾರತ ಸರ್ಕಾರ, ೧೯೮೧ ರಲ್ಲಿ ಅವರಿಗೆ ಪದ್ಮಶ್ರೀ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ. ಅವರ ಆತ್ಮಚರಿತ್ರೆಯ ಕನ್ನಡ ಅನುವಾದ "ಏರುಘಟ್ಟದ ನಡಿಗೆ" ಇತ್ತೀಚಿಗೆ ಬಿಡುಗಡೆಯಾಗಿತ್ತು.

***************

ಗುಜರಾತ್‌ನ ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ವಿಜಯ್ ಹಜಾರೆ ಟ್ರೋಫಿ ಪಂದ್ಯಾವಳಿಯ ಎಲೈಟ್ 'ಎ' ಗುಂಪಿನ ಏಕದಿನ ಕ್ರಿಕೆಟ್ ಪಂದ್ಯದಲ್ಲಿ ಕರ್ನಾಟಕ ತಂಡದ ವಿರುದ್ಧ ಮಧ್ಯಪ್ರದೇಶ ತಂಡ, ಏಳು ವಿಕೆಟ್‌ಗಳಿಂದ ಭರ್ಜರಿ ಜಯ ಸಾಧಿಸಿದೆ.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಕರ್ನಾಟಕ, ೪೭.೪ ಓವರ್‌ಗಳಲ್ಲಿ ೨೦೭ ರನ್ ಗಳಿಗೆ ತನ್ನೆಲ್ಲಾ ವಿಕೆಟ್‌ಗಳನ್ನು ಕಡೆದುಕೊಂಡಿತು. ಈ ಗುರಿಯನ್ನು ಬೆನ್ನತ್ತಿದ ಮಧ್ಯಪ್ರದೇಶ ತಂಡ, ಕೇವಲ ೨೩.೨ ಓವರ್‌ಗಳಲ್ಲಿ ೩ ವಿಕೆಟ್ ನಷ್ಟಕ್ಕೆ ೨೦೮ ರನ್ ಗಳಿಸುವ ಮೂಲಕ ಗೆಲುವಿನ ನಗೆ ಬೀರಿತು.

***************

ಬೆಂಗಳೂರಿನಲ್ಲಿ ನಡೆಯುತ್ತಿರುವ ಬೆಂಗಳೂರು ಓಪನ್ ಟೆನಿಸ್ ಪಂದ್ಯಾವಳಿಯ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು ಫ್ರಾನ್ಸ್‌ನ ಮ್ಯಾಟಿಯೊ ಮಾರ್ಟಿನಿಯೋ ವಿರುದ್ಧ ೬-೪, ೭-೬ ಅಂತರದಿಂದ ಭಾರತದ ಮಾನಸ್ ದಾಮ್ನೆ ಪರಾಭವಗೊಂಡಿದ್ದಾರೆ.

***************

ಸಿರಿಧಾನ್ಯಗಳಿಂದ ತಯಾರಿಸಲ್ಪಡುವ ವಿಭಿನ್ನ ರೀತಿಯ ಖಾದ್ಯಗಳಿಂದ ಆರೋಗ್ಯಯುತ ಜೀವನಶೈಲಿ ನಮ್ಮದಾಗಿಸಿಕೊಳ್ಳಬಹುದು ಎಂದು ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಜಯರಾಮ್ ಹೇಳಿದ್ದಾರೆ.

*******ಮುಕ್ತಾಯ*******